12

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ ... ಯೋಜಕ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 10-11-2009

## ಸುತ್ತೋಲೆ

ವಿಷಯ :- ಸರ್ಕಾರಿ ಶಾಲೆಗಳಿಗೆ ಸಂಬಂಧಿಸಿದ ಜಮೀನುಗಳನ್ನು ಬೇರೆ ಇಲಾಖೆಗಳಿಗೆ ಹಸ್ತಾಂತರಿಸುವ ವಿಷಯಕ್ಕೆ ಸಂಬಂಧಿಸಿದ ಬಗ್ಗೆ.

-----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ನಿವೇಶನ/ಜಮೀನುಗಳನ್ನು ಹಿಂದೆ ದಾನಿಗಳು ಶಾಲೆಗಳಿಗೆ ಅನುಕೂಲವಾಗಲೆಂದು ನಿರ್ಮಲ ಮನಸ್ಸಿನಿಂದ ಸರ್ಕಾರಕ್ಕೆ ದಾನವಾಗಿ ನೀಡಿರುತ್ತಾರೆ. ಈಗ ಹಲವಾರು ಶಾಲೆಗಳಿಗೆ ಕಟ್ಟಡ ನಿರ್ಮಿಸಲು, ಆಟದ ಮೈದಾನ, ಕಾಂಪೌಂಡ್ ನಿರ್ಮಿಸಲು ಹಾಗೂ ಇನ್ನೂ ಅನೇಕ ರೀತಿಯ ಸೌಲಭ್ಯಗಳನ್ನು ಒದಗಿಸಲು ಜಮೀನಿನ ಅವಶ್ಯಕತೆ ತುಂಬಾ ಇರುತ್ತದೆ. ಅಲ್ಲದೇ ಕೆಲವೆಡೆ ನಗರದ ಮಧ್ಯಭಾಗದಲ್ಲಿ ನಿವೇಶನಗಳು ಹಾಗೂ ಜಮೀನುಗಳು ಇರುವ ಉದಾಹರಣೆಗಳೂ ಸಾಕಷ್ಟಿವೆ. ಮಕ್ಕಳ ಕಲಿಕೆಗೆ ಉತ್ತಮ ವಾತಾವರಣ ನಿರ್ಮಿಸುವುದು ಇಂದಿನ ಸನ್ನಿವೇಶದಲ್ಲಿ ಅತ್ಯಂತ ಅವಶ್ಯಕವಾದ ಸಂಗತಿಯಾಗಿರುತ್ತದೆ.

ಆದರೆ ಅನೇಕ ಇಲಾಖೆಗಳು, ಸಂಘ ಸಂಸ್ಥೆಗಳು, ತಮ್ಮ ಇಲಾಖೆಗಳಿಗೆ ಕಟ್ಟಡ ನಿರ್ಮಿಸಿಕೊಳ್ಳಲು, ರಂಗ ಮಂಟಪ ನಿರ್ಮಿಸಲು, ಬಸ್ ನಿಲ್ದಾಣ ಕಲ್ಪಿಸಲು ಮುಂತಾದ ಕಾರಣಗಳಿಗಾಗಿ ಶಿಕ್ಷಣ ಇಲಾಖೆಗೆ ಸೇರಿದ ಜಮೀನು/ನಿವೇಶನಗಳನ್ನು ನೀಡುವಂತೆ ಪ್ರಸ್ತಾವನೆಗಳನ್ನು ತಮ್ಮ ಇಲಾಖೆ ಮೂಲಕ ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ. ಇಂತಹ ಪ್ರಸಂಗಗಳಿಂದಾಗಿ ಶಿಕ್ಷಣ ಇಲಾಖೆಗೆ ಸೇರಿದ ನಿವೇಶನಗಳನ್ನು ನೀಡುತ್ತಾ ಹೋದಲ್ಲಿ ಮುಂದೊಂದು ದಿನ ಶಿಕ್ಷಣ ಇಲಾಖೆಗಳಿಗೆ ಜಮೀನು/ನಿವೇಶನಗಳ ಲಭ್ಯತೆ ಇಲ್ಲದಂತಾಗುತ್ತದೆ. ಆದುದರಿಂದ ಇನ್ನು ಮುಂದೆ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಜಮೀನುಗಳ ಬದಲಿಗೆ ಬೇರೆ ಇಲಾಖೆಗಳಿಗೆ ಸೇರಿದ ನಿವೇಶನಗಳನ್ನು ಗುರುತಿಸಿ ಪಡೆದುಕೊಳ್ಳುವಂತೆ ಅವರಿಗೆ ತಮ್ಮ ಹಂತದಲ್ಲಿಯೇ ಸೂಚನೆ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

(ವಿ.ವಿ. ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ಶಿಕ್ಷಣ ಇಲಾಖೆ(ಯೋಜನೆ).

ಹಿರಿಯ ಸಹಾಯಕ ನಿರ್ದೇಶಕರು (ಪ್ರಾಥಮಿಕ) ಆಯುಕ್ತರ ಕಛೇರಿ ... ಇಲಾಖೆ

ಪ್ರತಿಯನ್ನು:-

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ
3. ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), (ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, (ಆಯುಕ್ತರು, ಸಾರ್ವಜನಿಕ ಶಿಕ್ಷಣ
6. ಇಲಾಖೆರವರ ಮುಖಾಂತರ)
7. ಕಛೇರಿ ಪ್ರತಿ.